ಕರ್ನಾಟಕ ಸರ್ಕಾರ
ಆಯುಕ್ತರ ಕಚೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕೇಂದ್ರೀಕೃತ ದಾಖಲಾತಿ ಘಟಕ, ಸೆಂಟ್ರಲ್ ಜೂನಿಯರ್ ಕಾಲೇಜು ಆವರಣ, ಕೆಂಪೇಗೌಡ ರಸ್ತೆ, ಬೆಂಗಳೂರು–560009

Phone: 22228805, 22483140, 22483145
e-mail :- cackarnataka@gmail.com

ಸಂಖ್ಯೆ: ಸಿಎಸಿ–05/ಬಿ.ಇಡಿ.ದಾ–01/2021–22 ದಿನಾಂಕ:23–11–2021

## ಪ್ರಕಟಣೆ

ವಿಷಯ: 2021–22ನೇ ಸಾಲಿನ ಬಿ.ಇಡಿ ಕೋರ್ಸಿನ ದಾಖಲಾತಿಗಾಗಿ ಆನ್‌ಲೈನ್ ಅರ್ಜಿ ಸಲ್ಲಿಕೆಯ ಅಂತಿಮ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

**ಉಲ್ಲೇಖ:1.**ಸರ್ಕಾರದ ಆದೇಶ ಸಂಖ್ಯೆ: ಇಡಿ 96 ವಿವಿಧ 2021, ದಿನಾಂಕ:17–09–2021.
2.ಈ ಕಛೇರಿ ಪತ್ರ.ಸಂಖ್ಯೆ: ಸಿಎಸಿ–05/ಬಿ.ಇಡಿ.ದಾ–01/2021–22 ದಿನಾಂಕ:11.10.2021.
3.ಸರ್ಕಾರದ ಆದೇಶ ಸಂಖ್ಯೆ :ಇಡಿ/96/ವಿವಿಧ/2021, ಬೆಂಗಳೂರು,ದಿನಾಂಕ:20.11.2021.

2021–22ನೇ ಸಾಲಿಗೆ ಎರಡು ವರ್ಷದ ಬಿ.ಇಡಿ ಕೋರ್ಸಿನ ವ್ಯಾಸಂಗಕ್ಕಾಗಿ ರಾಜ್ಯದ ಸರ್ಕಾರಿ, ಮಾನ್ಯತೆ ಪಡೆದ ಅನುದಾನಿತ ಹಾಗೂ ಅನುದಾನ ರಹಿತ ಬಿ.ಇಡಿ ಕಾಲೇಜುಗಳಲ್ಲಿನ ಸರ್ಕಾರಿ ಕೋಟಾದ ಸೀಟುಗಳ ದಾಖಲಾತಿಗಾಗಿ ಉಲ್ಲೇಖ–1ರ ಸರ್ಕಾರದ ನಿರ್ದೇಶನದಂತೆ ಆನ್‌ಲೈನ್ ಅರ್ಜಿಗಳನ್ನು ಸಲ್ಲಿಸಲು ದಿನಾಂಕ:23–09–2021 ರಿಂದ 13–10–2021ರ ವರೆಗೆ ಅವಕಾಶ ಕಲ್ಪಿಸಲಾಗಿತ್ತು.

ಆದರೆ ಹಲವಾರು ವಿದ್ಯಾರ್ಥಿಗಳು ಮತ್ತು ಪೋಷಕರು ಈ ಕಛೇರಿಗೆ ಮನವಿಗಳನ್ನು ಸಲ್ಲಿಸಿ, ವಿಶ್ವವಿದ್ಯಾಲಯಗಳಲ್ಲಿ 2020–21ನೇ ಸಾಲಿನ ಪದವಿಯ ಅಂತಿಮ ಸೆಮಿಸ್ಟರ್‌ಗಳ ಪರೀಕ್ಷೆಗಳು ಇನ್ನೂ ನಡೆಯುತ್ತಿದ್ದು, ಫಲಿತಾಂಶ ಪ್ರಕಟಣೆಯ ನಿರೀಕ್ಷೆಯಲ್ಲಿರುವ ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯದ ಹಿತದೃಷ್ಟಿಯಿಂದ ಆನ್‌ಲೈನ್ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ವಿಸ್ತರಿಸುವಂತೆ ಕೋರಿರುತ್ತಾರೆ.

2021–22ನೇ ಸಾಲಿನ ಬಿ.ಇಡಿ ಕೋರ್ಸಿನ ದಾಖಲಾತಿಗಾಗಿ ಆನ್‌ಲೈನ್ ಅರ್ಜಿಯನ್ನು ಸಲ್ಲಿಸಲು ಅಂತಿಮ ದಿನಾಂಕವನ್ನು ವಿಸ್ತರಿಸುವ ಸಂಬಂಧ ಅನುಮತಿ ಕೋರಿ ಉಲ್ಲೇಖ–2ರಲ್ಲಿ ಮಾನ್ಯ ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯನ್ನು ಕೋರಲಾಗಿತ್ತು.

ವಿದ್ಯಾರ್ಥಿಗಳು ಹಾಗೂ ಪೋಷಕರ ಮನವಿಗಳನ್ನು ಪರಿಗಣಿಸಿದ, ಮಾನ್ಯ ಸರ್ಕಾರವು 2021–22ನೇ ಸಾಲಿನ ಬಿ.ಇಡಿ ಕೋರ್ಸಿನ ದಾಖಲಾತಿ ಬಯಸಿ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ:24/11/2021 ರವರೆಗೆ ವಿಸ್ತರಿಸಲು ಉಲ್ಲೇಖ–3ರಲ್ಲಿ ಆದೇಶಿಸಿರುತ್ತದೆ. ಈ ಹಿನ್ನೆಲೆಯಲ್ಲಿ **ಬಿ.ಇಡಿ ಕೋರ್ಸಿನ ದಾಖಲಾತಿಗಾಗಿ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ:24/11/2021 ರವರೆಗೆ ವಿಸ್ತರಿಸಲಾಗಿದೆ.**

ಈಗಾಗಲೇ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ತಮ್ಮ ಆನ್‌ಲೈನ್ ಅರ್ಜಿಗಳಲ್ಲಿ ತಿದ್ದುಪಡಿಗಳೇನಾದರೂ ಇದ್ದಲ್ಲಿ ತಮ್ಮ USER NAME ಮತ್ತು PASSWORD ಅನ್ನು ನಮೂದಿಸುವುದರ ಮೂಲಕ Login ಆಗಿ ದಿನಾಂಕ:24–11–2021ರೊಳಗಾಗಿ ತಿದ್ದುಪಡಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಿದೆ.

ವಿಶೇಷಾಧಿಕಾರಿ
ಕೇಂದ್ರೀಕೃತ ದಾಖಲಾತಿ ಘಟಕ.